ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತನೆಯ ಅಧಿವೇಶನ
ಬುಧವಾರ, ದಿನಾಂಕ : 18 ನೇ ಮಾರ್ಚ್, 2020

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಸ್ತಿತ್ವದ ಕುರಿತು

ಡಾ|| ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :-

1152 (1372) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ ರಾಜ್ಯದಲ್ಲಿ ಅಸ್ತಿತ್ವಕ್ಕೆ ಬಂದಿದ್ದು ಯಾವಾಗ ; ಇದರ ಆಶಯಗಳು ಏನು ;

(ಆ) ಈ ಸಂಸ್ಥೆ ಮುಖಾಂತರ ಇದುವರೆಗೆ ನಿರ್ಮಿಸಲಾಗಿರುವ ಶಾಲಾ/ಕಾಲೇಜುಗಳ ವಿವರಗಳನ್ನು ನೀಡುವುದು ;

(ಇ) ಈ ಸಂಸ್ಥೆ ಪ್ರಾರಂಭವಾದಾಗಿನಿಂದ ಇದುವರೆವಿಗೂ ವೆಚ್ಚ ಮಾಡಿರುವ ಮೊತ್ತ ಎಷ್ಟು ? (ಸಮಾಜ ಕಲ್ಯಾಣ, ಹಿಂದುಳಿದ ವರ್ಗಗಳ ಕಲ್ಯಾಣ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಒಳಗೊಂಡಂತೆ ವಿವರಗಳನ್ನು ನೀಡುವುದು)